**ಕರ್ನಾಟಕ ಸರ್ಕಾರ ನಡವಳಿಗಳು**

ವಿಷಯ:- ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ 2009-10 ನೇ ಸಾಲಿನ ಬಿಲ್ಲುಗಳ ಪಾವತಿ ಬಗ್ಗೆ.

ಪ್ರಸ್ತಾವನೆ

ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 2009-10 ನೇ ಸಾಲಿನಲ್ಲಿ ನಿರ್ವಹಿಸಲಾದ ಕಾಮಗಾರಿಗಳಿಗೆ ಸಂಬಂಧಪಟ್ಟಂತೆ 2010-11 ನೇ ಸಾಲಿನಲ್ಲಿ ಹಣವನ್ನು ಪಾವತಿಸುವ ಕುರಿತು ಸ್ಪಷ್ಟೀಕರಣವನ್ನು ನೀಡುವಂತೆ ಮನವಿಯನ್ನು ಹಾಗೂ ಈ ಬಿಲ್ಲುಗಳ ಪಾವತಿಗಾಗಿ ಅನುದಾನವನ್ನು ಬಿಡುಗಡೆಗೊಳಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುತ್ತಿವೆ. ಈ ಎಲ್ಲ ಅಂಶಗಳ ಹಿನ್ನಲೆಯಲ್ಲಿ 2009-10 ನೇ ಸಾಲಿನಲ್ಲಿ ನಿರ್ವಹಿಸಲಾದ ಕಾಮಗಾರಿಗಳಿಗೆ 2010-11 ನೇ ಸಾಲಿನಲ್ಲಿ ಹಣ ಪಾವತಿಸುವ ಕುರಿತು ಸ್ಪಷ್ಟ ನಿರ್ದೇಶನ ನೀಡಬೇಕಾಗಿರುವ ಅವಶ್ಯಕತೆ ಇರುತ್ತದೆ. ಹಾಗೂ 2010-11 ನೇ ಸಾಲಿನ ಕಾಮಗಾರಿಗಳಿಗೆ ಹಣ ಪಾವತಿಸುವ ಕುರಿತು ಕೈಗೊಳ್ಳಬೇಕಾಗಿರುವ ಕ್ರಮಗಳನ್ನು ಸ್ಪಷ್ಟಪಡಿಸಬೇಕಾಗಿರುತ್ತದೆ. ಭಾರತ ಸರ್ಕಾರದ ಮಾರ್ಗಸೂಚಿಗಳನ್ನು ಗಮನದಲ್ಲಿಟ್ಟುಕೊಂಡು ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 143 ಮಗಾಂಉಖಾಯೊ 2010 ಬೆಂಗಳೂರು. ದಿನಾಂಕ:*05.10.2010***

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 2009-10 ನೇ ಸಾಲಿನಲ್ಲಿ ನಿರ್ವಹಿಸಲಾದ ಕಾಮಗಾರಿಗಳಿಗೆ ಹಣ ಪಾವತಿಸುವ ಕುರಿತು ಹಾಗೂ 2010-11 ನೇ ಸಾಲಿನ ಕಾಮಗಾರಿಗಳಿಗೆ ಹಣ ಪಾವತಿಸುವ ಸಂಬಂಧ ಈ ಕೆಳಗಿನಂತೆ ಕ್ರಮ ಕೈಗೊಳ್ಳಲು ಆದೇಶಿಸಿದೆ.

1. 2009-10 ನೇ ಸಾಲಿನಲ್ಲಿ ನಿರ್ವಹಿಸಿದ ಕಾಮಗಾರಿಯ ವಿವರಗಳನ್ನು 15-04-2010ರೊಳಗೆ ಎಂ.ಐ.ಎಸ್ ನಲ್ಲಿ ದಾಖಲಿಸದೇ ಇದ್ದರೆ ಅಂತಹ ಕಾಮಗಾರಿಗಳಿಗೆ ಪ್ರಸಕ್ತ ಸಾಲಿನಲ್ಲಿ ಹಣ ಪಾವತಿಸಲು ಅವಕಾಶ ಇರುವುದಿಲ್ಲ.
2. ಈಗಾಗಲೇ ಎಂ.ಐ.ಎಸ್‌ನಲ್ಲಿ ದಾಖಲಿಸಿರುವ ಮುಂದುವರೆದ ಕಾಮಗಾರಿಗಳಿಗೆ ಸಂಬಂಧಿಸಿದಂತೆ ವಾಸ್ತವವಾಗಿ ಕೂಲಿಕಾರರು ಕೆಲಸ ನಿರ್ವಹಿಸಿದ ಬಗ್ಗೆ ಎನ್.ಎಂ.ಆರ್‌ಗಳನ್ನು ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿ, ಸ್ಥಳ ತನಿಖೆ ನಡೆಸಿ ಕಾಮಗಾರಿಗಳು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು/ ಜಿಲ್ಲಾ ಪರಿಶೀಲನಾ ತಂಡವು ಪೂರ್ಣಗೊಂಡಿರುವುದನ್ನು ದೃಢೀಕರಿಸಿದ ನಂತರವೇ ಹಣ ಪಾವತಿಸುವುದು. ಕೂಲಿಯ ಹಣವನ್ನು ಪಾವತಿಸುವಾಗ Validated Job Card ಹೊಂದಿರುವವರಿಗೆ ಮಾತ್ರ ಕೂಲಿ ಹಣವನ್ನು ಪಾವತಿಸಲು ಕ್ರಮಜರುಗಿಸುವುದು ಹಾಗೂ ಪಾವತಿ ದಿನಾಂಕವನ್ನು ತಪ್ಪದೇ ಎಂ.ಐ.ಎಸ್‌ನಲ್ಲಿ ದಾಖಲಿಸುವುದು.
3. 2010-11 ನೇ ಸಾಲಿನಲ್ಲಿ ಎಂ.ಐ.ಎಸ್‌ನಲ್ಲಿ ದಾಖಲಿಸದೇ ಯಾವುದೇ ಕಾಮಗಾರಿಗೆ ಹಣ ಪಾವತಿಸತಕ್ಕದ್ದಲ್ಲ. ಒಂದು ವೇಳೆ ಎಂ.ಐ.ಎಸ್‌ನಲ್ಲಿ ದಾಖಲಿಸದೇ ಹಣ ಪಾವತಿಸಿದಲ್ಲಿ ಸಂಬಂಧಪಟ್ಟ ಜಿಲ್ಲಾ ಕಾರ್ಯಕ್ರಮ ಅಧಿಕಾರಿ/ ಕಾರ್ಯಕ್ರಮ ಅಧಿಕಾರಿಯನ್ನು ನೇರವಾಗಿ ಹೊಣೆಗಾರರನ್ನಾಗಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್ ಎಸ್ ಪ್ರಸನ್ನಕುಮಾರ್)
ನಿರ್ದೇಶಕರು,
ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ
ಖಾತರಿ ಯೋಜನೆ ಹಾಗೂ ಪದ ನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಜಿಲ್ಲಾ ಪಂಚಾಯತ್ ಕಾರ್ಯಾಲಯ,
ಚಿಕ್ಕಬಳ್ಳಾಪುರ ಜಿಲ್ಲೆ
ದಿನಾಂಕ : 15/10/10
ಸ್ವೀಕೃತಿ ಸಂಖ್ಯೆ :
[illegible]

ಕರ್ನಾಟಕ ಸರ್ಕಾರ, ಬೆಂಗಳೂರು/ಧಾರವಾಡ.